ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಬುಧವಾರ 15ನೇ ಏಪ್ರಿಲ್ 1998 ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 11.30 ಗಂಟೆಗೆ ಸಮಾವೇಶಗೊಂಡಿತು.

ಉಪಾಧ್ಯಕ್ಷರು : **(ಶ್ರೀ ಚಂದ್ರಶೇಖರ್ ಎಂ. ಮಾಮನಿ)** ಅವರು

ಪೀಠವನ್ನು ಅಲಂಕರಿಸಿದ್ದರು.

ಸಂತಾಪ ಸೂಚನೆ

ಉಪಾಧ್ಯಕ್ಷರು : ಮಾಜಿ ಶಾಸಕರಾದ ಶ್ರೀ ಎನ್.ಜಿ. ನಾಯಕ್‌ರವರು ದಿನಾಂಕ : 7-4-98 ರಂದು ನಿಧನರಾದದ್ದನ್ನು ವಿಷಾದದಿಂದ ಈ ಸದನಕ್ಕೆ ತಿಳಿಸುತ್ತಿದ್ದೇನೆ.

ಶ್ರೀಯುತರು 1983-84 ರವರೆಗೆ 7ನೇ ವಿಧಾನಸಭೆ ಹಾಗೂ 1989 -94ರವರೆಗೆ 9ನೇ ವಿಧಾನ ಸಭೆಗೆ ಮೊಳಕಾಲ್ಮೂರು ಕ್ಷೇತ್ರದಿಂದ ಆಯ್ಕೆಯಾಗಿ ಮೊಳಕಾಲ್ಮೂರು ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸಿರುತ್ತಾರೆ. ಶ್ರೀಯುತರು ದೀನದಲಿತರ, ಹಿಂದುಳಿದ ವರ್ಗಗಳ ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳವರ ಅಭಿವೃದ್ಧಿಗಾಗಿ ಶ್ರಮಿಸಿರುತ್ತಾರೆ. ಹಾಗೂ ಕೆಲವು ಕಾಲ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುತ್ತಾರೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೋರುತ್ತೇನೆ.

(ಸದನವು ಒಂದು ನಿಮಿಷ ಮೌನವನ್ನಾಚರಿಸಿತು).

ಉಪಾಧ್ಯಕ್ಷರು : ಈ ಸಭೆಯು ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಮೃತರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

ಕುಡಿಯುವ ನೀರಿನ ಸಮಸ್ಯೆ ಬಗ್ಗೆ

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು) : ಮಾನ್ಯ ಉಪಾಧ್ಯಕ್ಷರೆ, ಅದಕ್ಕೂ ಮೊದಲು ಎರಡು ಪ್ರಮುಖವಾದ ವಿಚಾರಗಳಿವೆ. ಅವುಗಳೆಂದರೆ ಕುಡಿಯುವ ನೀರಿನ ಬಗ್ಗೆ ಮತ್ತು 97-98ನೇ ಸಾಲಿನಲ್ಲಿ ನಿಗದಿಪಡಿಸಿದ್ದ ಹಣವೂ ಸಹ ಬಿಡುಗಡೆಯಾಗದಿರುವುದು.